ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯಲ್ಲಿ ನೋಂದಣಿಯಾದ ಕಾರ್ಮಿಕರ ಸಂಖ್ಯೆ ಬಗ್ಗೆ

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) –

61 (52) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಒಟ್ಟು ನೋಂದಣಿಯಾದ ಕಾರ್ಮಿಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) 2015 ರಿಂದ ಡಿಸೆಂಬರ್-1 2020 ರವರೆಗೆ ನೋಂದಣಿಯಾದ ಕಾರ್ಮಿಕ ಕುಟುಂಬಗಳಿಗೆ ನೀಡಿದ ಸೌಲಭ್ಯಗಳಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಪರಿಹಾರಕ್ಕಾಗಿ ಕಾರ್ಮಿಕರು ಹಾಕಿದ ಒಟ್ಟು ಅರ್ಜಿಗಳೆಷ್ಟು; ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ; ಬಾಕಿಯಿರುವ ಅರ್ಜಿಗಳೆಷ್ಟು; ಬಾಕಿ ಉಳಿಯಲು ಕಾರಣಗಳೇನು; (ವಿವರ ನೀಡುವುದು)

(ಈ) 2015 ರಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಗೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ; ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಅನುದಾನ ಬಿಡುಗಡೆಯಾಗಿದೆ;

(ಉ) ಬಿಡುಗಡೆಯಾಗಿದ್ದಲ್ಲಿ, ಇಲ್ಲಿಯವರೆಗೆ ನೋಂದಣಿಯಾದ ಕಾರ್ಮಿಕ ಕುಟುಂಬಗಳಿಗೆ ಯಾವ ಯಾವ ಸೌಲಭ್ಯಗಳಡಿ ಪ್ರೋತ್ಸಾಹಧನ ನೀಡಲಾಗಿದೆ; ನೀಡಿದ್ದಲ್ಲಿ ಫಲಾನುಭವಿಗಳವಾರು ನೀಡಿದ ಮೊತ್ತದ ವಿವರ ಮತ್ತು ದಿನಾಂಕ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು?